**ಕರ್ನಾಟಕ ಸರ್ಕಾರದ ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು-01.**

ಸಂಖ್ಯೆ: ಸಿ1(8)ಇತರೆ.ತರಬೇತಿ.03/2012-13

ದಿನಾಂಕ: 03.05.2012

**ಜ್ಞಾಪನ**

ವಿಷಯ: ಸಾರ್ವಜನಿಕ ಶಿಕ್ಷಣ ಇಲಾಖೆಯ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ 05 ದಿನಗಳ ತರಬೇತಿ ನೀಡುವ ಬಗ್ಗೆ.

ಉಲ್ಲೇಖ: ಈ ಕಛೇರಿಯ ಸಮಸಂಖ್ಯೆ ಜ್ಞಾಪನ ದಿನಾಂಕ: 28.04.2012.

* * * * * * *

ವಿಷಯಕ್ಕೆ ಸಂಬಂಧಿಸಿದಂತೆ ಸಾರ್ವಜನಿಕ ಶಿಕ್ಷಣ ಇಲಾಖೆಯ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ 05 ದಿನಗಳ ತರಬೇತಿ ನೀಡುವ ಬಗ್ಗೆ ಉಲ್ಲೇಖಿತ 1 ರ ಈ ಕಛೇರಿ ಅಧಿಕೃತ ಜ್ಞಾಪನದಲ್ಲಿ ತಲಾ 50 ಅಧಿಕಾರಿಗಳಂತೆ 4 ತಂಡಗಳನ್ನು ರಚಿಸಿ ದಿನಾಂಕ: 07.05.2012 ರಿಂದ 02.06.2012 ರ ವರೆಗೆ ತರಬೇತಿಗೆ ನಿಯೋಜಿಸಲಾಗಿರುವುದು ಸರಿಯಷ್ಟೇ.

ಪ್ರಸ್ತುತ ತಿಂಗಳಿನಲ್ಲಿ ಸಾರ್ವಜನಿಕ ಶಿಕ್ಷಣ ಇಲಾಖೆಯ ಬೋಧಕ ಮತ್ತು ಬೋಧಕೇತರ ವೃಂದದ ನೌಕರರು ಮತ್ತು ಅಧಿಕಾರಿಗಳ ವರ್ಗಾವಣೆ ಪ್ರಕ್ರಿಯೆ ಜಾರಿಯಲ್ಲಿರುವುದರಿಂದ ಮತ್ತು ಶಿಕ್ಷಣ ಹಕ್ಕು ಅಧಿನಿಯಮ ಅನುಷ್ಠಾನ ಪ್ರಕ್ರಿಯೆ ಪ್ರಗತಿಯಲ್ಲಿದ್ದು ಇಲಾಖಾ ಅಧಿಕಾರಿಗಳ ಉಪಸ್ಥಿತಿ ಅನಿವಾರ್ಯವಾಗಿದೆ. ಈ ಹಿನ್ನಲೆಯಲ್ಲಿ ಆಯೋಜಿತ ತರಬೇತಿಯನ್ನು ಮುಂದೂಡಲಾಗಿದೆ. ತರಬೇತಿಯ ಮುಂದಿನ ದಿನಾಂಕವನ್ನು ತಿಳಿಸಲಾಗುವುದು.

(ವಿ.ಜಿ.ದಿವಾಕರ್)
ಅಪರ ಆಯುಕ್ತರು (ಆಡಳಿತ)

ರಾಜ್ಯದ ಎಲ್ಲ ಉಪನಿರ್ದೇಶಕರು/ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ.

ಪ್ರತಿಯನ್ನು:

1. ರಾಜ್ಯ ಯೋಜನಾ ನಿರ್ದೇಶಕರು, ಸರ್ವ ಶಿಕ್ಷಣ ಅಭಿಯಾನ, ಬೆಂಗಳೂರು-01. ಇವರಿಗೆ ಮಾಹಿತಿಗಾಗಿ.
2. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಗುಲ್ಬರ್ಗಾ/ಧಾರವಾಡ ಆಯುಕ್ತಾಲಯಗಳು ಇವರಿಗೆ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
3. ಅಜೀಂ ಪ್ರೇಮ್‌ಜಿ ಯೂನಿವರ್ಸಿಟಿ, ಪಿ.ಇ.ಎಸ್ ಸ್ಕೂಲ್ ಆಫ್ ಇಂಜಿನೀಯರಿಂದ ಕ್ಯಾಂಪಸ್, ಪಿಕ್ಸೆಲ್ ಪಾರ್ಕ್ ಬಿ ಬ್ಲಾಕ್, ಎಲೆಕ್ಟ್ರಾನಿಕ್ ಸಿಟಿ, ಹೊಸೂರು ರಸ್ತೆ, ಬೆಂಗಳೂರು ಇವರಿಗೆ ಮಾಹಿತಿಗಾಗಿ.
4. ಸಂಬಂಧಿಸಿದ ಸಂಪನ್ಮೂಲ ವ್ಯಕ್ತಿಗಳಿಗೆ ಮಾಹಿತಿಗಾಗಿ.
5. ಮಾನ್ಯ ಆಯುಕ್ತರ ಆಪ್ತ ಶಾಖೆಗೆ ಮಾಹಿತಿಗಾಗಿ.
6. ಕಛೇರಿ ಪ್ರತಿ.

\\Typing3server\typing3server\D\EST1\BEO-traning.doc